# Bangalore
# Regional News
# 15.06.2024 / 1840 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಪ್ರವಾಸೋದ್ಯಮಕ್ಕೆ ಹೂಡಿಕೆದಾರರ ಆಕರ್ಷಣೆಗಾಗಿ ನೂತನ ನೀತಿ ಜಾರಿಗೆ ಉದ್ದೇಶ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

೨. ಧಾರವಾಡ ಜಿಲ್ಲೆಯಲ್ಲಿ ಡೆಂಘಿ ಜ್ವರದ ಬಗ್ಗೆ ಜನಜಾಗೃತಿ ಹೆಚ್ಚಿಸಲು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸೂಚನೆ

೩. ಕೌಶಲ್ಯಾಧಾರಿತ ಶಿಕ್ಷಣ, ನಿರುದ್ಯೋಗ ಸಮಸ್ಯೆಗೆ ಪರಿಹಾರವಾಗಬಲ್ಲದು - ಸಚಿವ ಡಾ. ಎಂ.ಸಿ. ಸುಧಾಕರ್

೪. ಇದೇ ೧೮ರಂದು ಪಿಎಂ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೯ ಕೋಟಿ ೩ ಲಕ್ಷ ರೈತರ ಖಾತೆಗಳಿಗೆ ೨೦ ಸಾವಿರ ಕೋಟಿ ರೂಪಾಯಿ ವರ್ಗಾವಣೆ

**<><*<><>*><>**

ರಾಜ್ಯ ಸರ್ಕಾರ ಪ್ರವಾಸೋದ್ಯಮದ ಅಭಿವೃದ್ಧಿಗೆ ಬದ್ಧವಾಗಿದ್ದು, ಹೆಚ್ಚು ಬಂಡವಾಳ ಹೂಡಿಕೆದಾರರ ಆಕರ್ಷಣೆಗೆ ಪ್ರವಾಸೋದ್ಯಮ ನೀತಿ ಜಾರಿಗೆ ತರಲು ಉದ್ದೇಶಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಇಂದು ನಡೆದ ದಕ್ಷಿಣ ಭಾರತ ಉತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ೩೦೦ ಕಿಲೋಮೀಟರ್‌ಗೂ ಹೆಚ್ಚು ಕರಾವಳಿ ಪ್ರದೇಶವನ್ನು ಹೊಂದಿದೆ. ಸಾಗರೋತ್ತರ ಉದ್ದಿಮೆಯ ಅಭಿವೃದ್ಧಿಗೂ ವಿಫುಲ ಅವಕಾಶವಿದೆ ಎಂದರು. ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ಮಾತನಾಡಿ, ರಾಜ್ಯದ ಕಡಲತೀರದಲ್ಲಿರುವ ೪೦ ತಾಣಗಳನ್ನು ಅಭಿವೃದ್ಧಿಪಡಿಸಲಾಗುವುದು. ಆಸಕ್ತ ಕೈಗಾರಿಕೋದ್ಯಮಗಳನ್ನು ಇದಕ್ಕೆ ಆಹ್ವಾನಿಸಲಾಗಿದೆ. ರಾಜ್ಯದಲ್ಲಿ ೨೫ ಸಾವಿರಕ್ಕೂ ಹೆಚ್ಚು ಮಹತ್ವದ ಸ್ಮಾರಕಗಳಿದ್ದು, ಕೇವಲ ೫೦೦ ತಾಣಗಳನ್ನು ಮಾತ್ರ ಸಂರಕ್ಷಿಸಲಾಗಿದೆ. ಉಳಿದ ಸ್ಮಾರಕಗಳ ಸಂರಕ್ಷಣೆಗೆ ಸ್ಮಾರಕದತ್ತು ಯೋಜನೆ ರೂಪಿಸಲಾಗಿದ್ದು, ದಾನಿಗಳು ದತ್ತು ಸ್ವೀಕಾರಕ್ಕೆ ಮುಂದಾಗಬೇಕೆಂದು ಮನವಿ ಮಾಡಿದರು.

**<><*<><>*><>**

ಮಳೆಗಾಲ ಆರಂಭದ ಹಿನ್ನೆಲೆಯಲ್ಲಿ ಧಾರವಾಡ ಜಿಲ್ಲೆಯಲ್ಲಿ ಡೆಂಘಿ ಜ್ವರದ ಪ್ರಕರಣಗಳು ಹಲವೆಡೆ ವರದಿಯಾಗುತ್ತಿದ್ದು, ಈ ಜ್ವರದ ಬಗ್ಗೆ ಜನಜಾಗೃತಿ ಮೂಡಿಸಲು ಕ್ರಮಕೈಗೊಳ್ಳುವಂತೆ ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಖಾತೆಯ ಸಚಿವ ಪ್ರಲ್ಹಾದ್ ಜೋಶಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿ ತಾಲೂಕಿನಲ್ಲಿ ಡೆಂಘಿ ಜನಜಾಗೃತಿಗೆ ಜಿಲ್ಲಾಮಟ್ಟದ ನೋಡಲ್ ಅಧಿಕಾರಿಯ ನೇಮಕಕ್ಕೆ ನಿರ್ದೇಶಿಸಲಾಗಿದೆ ಎಂದರು. ಮುಮ್ಮಿಗಟ್ಟಿ ಗ್ರಾಮದಲ್ಲಿ ಹೆಚ್ಚಿನ ಪ್ರಕರಣಗಳು ಪತ್ತೆಯಾಗಿವೆ. ಸಾಮಾಜಿಕ ಮಾಧ್ಯಮದ ಮೂಲಕವೂ ಪರಿಣಾಮಕಾರಿ ಜಾಗೃತಿಗೆ ಒತ್ತು ನೀಡಲು ತಿಳಿಸಲಾಗಿದೆ ಎಂದರು. ರಾಷ್ಟ್ರೀಯ ಆಹಾರ ಅಭಿಯಾನ ಯೋಜನೆಯಲ್ಲಿ ಕೇಂದ್ರ ಸರ್ಕಾರ ನೀಡುತ್ತಿರುವ ಅನುದಾನ ರಾಜ್ಯದಲ್ಲಿ ಸೂಕ್ತವಾಗಿ ಬಳಕೆಯಾಗುತ್ತಿಲ್ಲ ಎನ್ನುವ ಆರೋಪವಿದೆ. ರಾಜ್ಯ ಸರ್ಕಾರ ಈ ಬಗ್ಗೆ ಗಂಭೀರವಾಗಿ ಗಮನಹರಿಸಬೇಕು ಎಂದು ಪ್ರಲ್ಹಾದ್ ಜೋಶಿ ಹೇಳಿದರು.

**<><*<><>*><>**

ನಿರುದ್ಯೋಗ ಸಮಸ್ಯೆ ನಿವಾರಿಸಲು ರಾಜ್ಯ ಸರ್ಕಾರ ಕೌಶಲ್ಯಾಧಾರಿತ ಶಿಕ್ಷಣಕ್ಕೆ ಒತ್ತು ನೀಡುತ್ತಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ.ಸುಧಾಕರ್ ಹೇಳಿದ್ದಾರೆ. ಮಂಗಳೂರು ವಿಶ್ವವಿದ್ಯಾಲಯದ ೪೨ನೇ ಘಟಿಕೋತ್ಸವದಲ್ಲಿ ಮಾತನಾಡಿದ ಅವರು, ಪ್ರಸಕ್ತ ವರ್ಷ ಏಪ್ರಿಲ್‌ನಲ್ಲಿ ದೇಶದ ಗ್ರಾಮಾಂತರ ಪ್ರದೇಶದಲ್ಲಿ ಶೇಕಡ ೭.೮ ಹಾಗೂ ನಗರ ಪ್ರದೇಶದಲ್ಲಿ ಶೇಕಡ ೮.೭ ರಷ್ಟು ನಿರುದ್ಯೋಗವಿತ್ತು. ಐಟಿ ವಲಯದಲ್ಲಿ ಉದ್ಯೋಗಾವಕಾಶ ಕಡಿಮೆಯಾಗುತ್ತಿದೆ. ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳುವವರಿಗೆ ಅನುಭವವಿರಬೇಕೆಂದು ನಿರೀಕ್ಷಿಸಲಾಗುತ್ತದೆ. ಕೌಶಲ್ಯಾಧಾರಿತ ಶಿಕ್ಷಣ ದೊರೆತಲ್ಲಿ ಈ ಸವಾಲು ನಿರ್ವಹಣೆ ಸಾಧ್ಯವಾಗುತ್ತದೆ ಎಂದರು. ವಿದ್ಯಾರ್ಥಿಗಳಲ್ಲಿ ಕೌಶಲ್ಯ ಹೆಚ್ಚಿಸಲು ಇಂಟರ್ನ್‌ಶಿಪ್ ಆಧಾರಿತ ಕೋರ್ಸ್‌ಗಳು ಮತ್ತು ತಾಂತ್ರಿಕ ಶಿಕ್ಷಣದಲ್ಲಿ ಹಲವು ಬದಲಾವಣೆ ತರಲಾಗುತ್ತಿದೆ. ಕೌಶಲ್ಯಾಧಾರಿತ ಪದವಿ ಕೋರ್ಸ್‌ಗಳನ್ನು ಪರಿಚಯಿಸಲಾಗುತ್ತಿದೆ ಎಂದು ಡಾ. ಎಂ.ಸಿ. ಸುಧಾಕರ್ ಹೇಳಿದರು. , ಘಟಿಕೋತ್ಸವದಲ್ಲಿ ವಿವಿಧ ಕೋರ್ಸ್‌ಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪದವಿ ಪ್ರದಾನ ಮಾಡಿದರು.

<><*<><>*><>

ಮೈಸೂರು ಮೃಗಾಲಯವನ್ನು ಅಭಿವೃದ್ಧಿಪಡಿಸಿ ವಿಶ್ವಮಟ್ಟದ ಪ್ರವಾಸಿತಾಣವನ್ನಾಗಿ ಮಾಡಲಾಗುವುದು ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ಮೈಸೂರು ಮೃಗಾಲಯದಲ್ಲಿ ವಾಟ್ಸ್‌ಪ್ ಟಿಕೆಟ್ ನೀಡಿಕೆಗೆ ಇಂದು ಚಾಲನೆ ನೀಡಿ, ಅವರು ಮಾತನಾಡಿದರು. ಮೃಗಾಲಯದ ವೀಕ್ಷಣೆಗೆ ಟಿಕೆಟ್ ಪಡೆಯಲು ಇನ್ನು ಸಾಲಿನಲ್ಲಿ ಕಾಯಬೇಕಾಗಿಲ್ಲ. ವಾಟ್ಸ್‌ಪ್ ಮೂಲಕ ಟಿಕೆಟ್ ಖರೀದಿಸಬಹುದು. ಸಾರ್ವಜನಿಕರು ಈ ನೂತನ ವ್ಯವಸ್ಥೆಯ ಸದುಪಯೋಗ ಪಡೆದುಕೊಳ್ಳಬಹುದು ಎಂದರು. ಮೃಗಾಲಯದ ಸಾವಯವ ತ್ಯಾಜ್ಯವನ್ನು ಎರೆಹುಳು ಗೊಬ್ಬರವನ್ನಾಗಿ ಪರಿವರ್ತಿಸುವ ಯೋಜನೆಗೂ ಸಚಿವರು ಚಾಲನೆ ನೀಡಿದರು. ಮೈಸೂರು ಮೃಗಾಲಯದಲ್ಲಿ ಜನಿಸಿರುವ ಜಿರಾಫೆ ಮರಿಗೆ ದಕ್ಷ ಎಂದು ನಾಮಕರಣ ಮಾಡಿದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಪೋಡಿಮುಕ್ತ ಜಿಲ್ಲೆಯನ್ನಾಗಿಸುವ ಉದ್ದೇಶವಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಕಚೇರಿಯಲ್ಲಿ ಇಂದು ಮಾತನಾಡಿದ ಅವರು, ಸರ್ಕಾರದ ಯೋಜನೆಗಳನ್ನು ಅಧಿಕಾರಿಗಳು ಮುತುವರ್ಜಿಯಿಂದ ಸಾರ್ವಜನಿಕರಿಗೆ ತಲುಪಿಸಬೇಕು ಎಂದರು. ಜಿಲ್ಲೆಯಲ್ಲಿ ಬಡವರಿಗೆ ವಸತಿ ಕಲ್ಪಿಸಲು ನಿವೇಶನ ಹಂಚಿಕೆಗೆ ಕ್ರಮ ಕೈಗೊಳ್ಳಲಾಗುವುದು. ಇದಕ್ಕಾಗಿ ಜಿಲ್ಲೆಯ ಹಲವೆಡೆ ಜಾಗ ಗುರುತಿಸಲಾಗಿದೆ ಎಂದು ಸಚಿವರು ತಿಳಿಸಿದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಬರುವ ಮಂಗಳವಾರ ೧೮ ರಂದು 'ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ' ಯೋಜನೆಯಡಿ ೯ ಕೋಟಿ ೩ ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ೨೦ ಸಾವಿರ ಕೋಟಿ ರೂಪಾಯಿ ಮೊತ್ತವನ್ನು ವರ್ಗಾವಣೆ ಮಾಡಲಿದ್ದಾರೆ. ಕೇಂದ್ರ ಗ್ರಾಮೀಣಾಭಿವೃದ್ಧಿ, ಕೃಷಿ ಹಾಗೂ ರೈತ ಕಲ್ಯಾಣ ಖಾತೆ ಸಚಿವ ಶಿವರಾಜ್ ಸಿಂಗ್ ಚೌಹಾಣ್ ದೆಹಲಿಯಲ್ಲಿಂದು ಈ ವಿಷಯ ಪ್ರಕಟಿಸಿದ್ದಾರೆ. ಕಳೆದ ಹತ್ತು ವರ್ಷಗಳಲ್ಲಿ 'ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ' ಯೋಜನೆಯಡಿ ೧೧ ಕೋಟಿ  ರೈತರ ಖಾತೆಗಳಿಗೆ ೩ ಲಕ್ಷ ಕೋಟಿ ರೂಪಾಯಿ ಮೊತ್ತವನ್ನು ವರ್ಗಾಯಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಹಾವೇರಿ ಜಿಲ್ಲೆಯಲ್ಲಿ ಈ ಬಾರಿ ಬಿತ್ತನೆ ಪ್ರಮಾಣ ಹೆಚ್ಚಾಗಿದ್ದು, ರೈತರ ಬೇಡಿಕೆಗೆ ತಕ್ಕಂತೆ ಡಿಎಪಿ ಹಾಗೂ ಯೂರಿಯಾ ಸಂಗ್ರಹಿಸಿಕೊಂಡು ಸಕಾಲಕ್ಕೆ ಪೂರೈಸಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಪೂರೈಕೆಯಲ್ಲಾದ ಸಮಸ್ಯೆಯಿಂದ ಈ ಹಿಂದೆ ಗೋಲಿಬಾರ್ ಆಗಿದ್ದನ್ನು ಮರೆಯಬಾರದು. ರೈತರ ಪರವಾಗಿ ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದು ಅವರು ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಕೇಂದ್ರ ಸರ್ಕಾರದ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿದ ಅವರು, ಬಿತ್ತನೆ ಬೀಜ, ರಸಗೊಬ್ಬರ ಕೊರತೆ ಬಗ್ಗೆ ರೈತರಿಂದ ತಮಗೆ

ದೂರುಗಳು ಬರುತ್ತಿವೆ. ಪತ್ರಿಕೆಗಳಲ್ಲೂ ವರದಿಗಳು ಪ್ರಕಟವಾಗುತ್ತಿವೆ. ಮುಂಬರುವ ದಿನಗಳಲ್ಲಿ ಈ ವಿಷಯಗಳು ಮರುಕಳಿಸದಂತೆ ನೋಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

<><*<><>*><>

ಗ್ರಾಮೀಣ ಪ್ರದೇಶಗಳಲ್ಲಿ ನಾಗರಿಕ ನೋಂದಣಿ ಪದ್ಧತಿ ಬಲಪಡಿಸಲು ಜನನ-ಮರಣ ನೋಂದಣಿ ಕಾರ್ಯವನ್ನು ಇನ್ನು ಮುಂದೆ ಗ್ರಾಮ ಪಂಚಾಯಿತಿಗಳಲ್ಲೂ ಮಾಡಿಸಬಹುದು ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಸಿಇಒ ಗರಿಮಾ ಪನ್ವಾರ್ ತಿಳಿಸಿದ್ದಾರೆ. ಜಿಲ್ಲೆಯ ಎಲ್ಲ ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಜನನ-ಮರಣ ನೋಂದಣಿ ನಿಯಮಗಳು ಹಾಗೂ ಇ-ಜನ್ಮ ತಂತ್ರಾಂಶದ ಬಳಕೆ ಕುರಿತ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜನನ-ಮರಣ ನೋಂದಣಿ ಅತ್ಯವಶ್ಯವಾಗಿದೆ. ಇದುವರೆಗೆ ಆನ್‌ಲೈನ್ ನೋಂದಣಿ ಪ್ರಕ್ರಿಯೆ ನಗರ, ತಾಲೂಕು ಪ್ರದೇಶಗಳಲ್ಲಿ ಪುರಸಭೆ, ಪಟ್ಟಣ ಪಂಚಾಯಿತಿ, ನಗರಸಭೆಯಲ್ಲಿ ಮಾತ್ರ ಅನುಷ್ಠಾನದಲ್ಲಿತ್ತು. ಇದೀಗ ಗ್ರಾಮೀಣ ಪ್ರದೇಶಗಳಲ್ಲಿಯೂ ಈ ಪ್ರಕ್ರಿಯೆಯನ್ನು ಜಾರಿಗೆ ತರಲಾಗಿದೆ ಎಂದರು. ಗ್ರಾಮ ಪಂಚಾಯಿತಿಗಳ ಕಾರ್ಯದರ್ಶಿಗಳು ಜನನ-ಮರಣ ಉಪನೋಂದಣಿ ಅಧಿಕಾರಿಯಾಗಿಯೂ ಕಾರ್ಯನಿರ್ವಹಿಸುತ್ತಾರೆ ಎಂದರು.

<><*<><>*><>

ಸಫಾಯಿ ಕರ್ಮಚಾರಿ ರಾಷ್ಟ್ರೀಯ ಆಯೋಗದ ಅಧ್ಯಕ್ಷ ಎಂ. ವೆಂಕಟೇಶನ್ ವಿಜಯನಗರ ಜಿಲ್ಲೆಗೆ ಇಂದು ಭೇಟಿ ನೀಡಿದರು. ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಹೊಸಪೇಟೆ, ಕಮಲಾಪುರ, ಹಡಗಲಿ, ಹಗರಿಬೊಮ್ಮನಹಳ್ಳಿ ಸೇರಿದಂತೆ ಹಲವೆಡೆಯ ಪೌರ ಕಾರ್ಮಿಕರು ಅಧ್ಯಕ್ಷರಿಗೆ ತಮ್ಮ ಅಹವಾಲು ಸಲ್ಲಿಸಿದರು. ಸಫಾಯಿ ಕರ್ಮಚಾರಿ ರಾಷ್ಟ್ರೀಯ ಆಯೋಗವು ಸಂವಿಧಾನಾತ್ಮಕವಾಗಿ ರಚನೆಯಾಗಿದ್ದು, ಪೌರಕಾರ್ಮಿಕರ ಹಿತರಕ್ಷಣೆಗೆ ಬದ್ಧವಾಗಿದೆ. ಉತ್ತಮ ಆರೋಗ್ಯ ಸೌಲಭ್ಯಗಳು ಪ್ರತಿಯೊಬ್ಬರ ಹಕ್ಕು. ಪೌರಕಾರ್ಮಿಕರಿಗೂ ಆರೋಗ್ಯ ಸೌಲಭ್ಯಗಳು ದೊರೆಯುವಂತಾಗಲು ಎಲ್ಲ ಪುರಸಭೆ, ನಗರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ವಾರದೊಳಗೆ ಆರೋಗ್ಯ ಶಿಬಿರಗಳನ್ನು ನಡೆಸಬೇಕು ಎಂದು ಎಂ. ವೆಂಕಟೇಶನ್ ಸೂಚಿಸಿದರು. ಅವರು ನಂತರ ಕೊಪ್ಪಳದಲ್ಲೂ ಪೌರಕಾರ್ಮಿಕರನ್ನು ಭೇಟಿಯಾಗಿ ಅಹವಾಲು ಸ್ವೀಕರಿಸಿದರು.

<><*<><>*><>

ಕಾನೂನು ರಚನೆ ಮತ್ತು ತಿದ್ದುಪಡಿಯಲ್ಲಿ ವಕೀಲರ ಪಾತ್ರ ಮಹತ್ವದ್ದು ಎಂದು ರಾಜ್ಯ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಗದಗ್‌ನಲ್ಲಿಂದು ಹೇಳಿದ್ದಾರೆ. ವಕೀಲರೊಂದಿಗೆ ಸಂವಾದ ನಡೆಸಿದ ಅವರು, ದೇಶದ ಸಂವಿಧಾನಕ್ಕೆ ವಿರುದ್ಧವಾದ ಯಾವುದೇ ಕಾನೂನು ದೇಶದಲ್ಲಿಲ್ಲ. ಸಮಾಜದಲ್ಲಿ ಎಲ್ಲರಿಗೂ ಉತ್ತಮ ಜೀವನ ದೊರೆಯಬೇಕು ಎನ್ನುವುದು ಸಂವಿಧಾನದ ಆಶಯವಾಗಿದೆ ಎಂದರು.

<><*<><>*><>

ಇದೇ ೨೧ ರಂದು ನಡೆಯಲಿರುವ ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಪೂರ್ವಭಾವಿಯಾಗಿ ರಾಜ್ಯದೆಲ್ಲೆಡೆ ಯೋಗೋತ್ಸವ ತಾಲೀಮು ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆಯುತ್ತಿವೆ. ೨೧ ರಂದು ನಡೆಯುವ ಪ್ರಧಾನ ಕಾರ್ಯಕ್ರಮದಲ್ಲಿ ಯೋಗಾಭ್ಯಾಸ ಪ್ರದರ್ಶನ ನೀಡಲಿರುವ ಯೋಗಪಟುಗಳು ಯೋಗಾಸನ ಅಭ್ಯಾಸಗಳಲ್ಲಿ ನಿರತರಾಗಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ೨ ಲಕ್ಷಕ್ಕೂ ಹೆಚ್ಚು ಯೋಗಪಟುಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ. ೨೦ನೇ ತಾರೀಖಿನವರೆಗೂ ಕಾರ್ಯಕ್ರಮ ಇರುತ್ತದೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ತಬೀಬಾ ಬಾನು ತಿಳಿಸಿದ್ದಾರೆ. ಮೈಸೂರು, ಗದಗನಲ್ಲೂ ಯೋಗೋತ್ಸವ ಯಶಸ್ವಿಯಾಗಿ ನಡೆಯುತ್ತಿರುವುದಾಗಿ ನಮ್ಮ ಜಿಲ್ಲಾಪ್ರತಿನಿಧಿ ವರದಿ ಮಾಡಿದ್ದಾರೆ.

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿಗಳು

೧. ಇತ್ತೀಚೆಗೆ ನಡೆದ ಲೋಕಸಭೆ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರನ್ನು ಇಂದು ಭೇಟಿ ಮಾಡಿ, ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಅವರು ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಿಂದ ಆಯ್ಕೆಯಾಗಿ ಶಾಸಕರಾಗಿದ್ದರು.

೨. ಕೇಂದ್ರ ಸಾಹಿತ್ಯ ಅಕಾಡೆಮಿ ೨೦೨೪ನೇ ಸಾಲಿನ ಬಾಲ ಸಾಹಿತ್ಯ ಪುರಸ್ಕಾರ ಹಾಗೂ ಯುವ ಪುರಸ್ಕಾರಗಳನ್ನು ಪ್ರಕಟಿಸಿದೆ. ಬಾಲ ಸಾಹಿತ್ಯ ಪುರಸ್ಕಾರಕ್ಕೆ ಒಟ್ಟು ೨೪ ಹಾಗೂ ಸಾಹಿತ್ಯ ಯುವ ಪುರಸ್ಕಾರಕ್ಕೆ ೨೩ ಸಾಹಿತಿಗಳು ಆಯ್ಕೆಯಾಗಿದ್ದಾರೆ. ಈ ಪುರಸ್ಕಾರ ೫೦ ಸಾವಿರ ರೂಪಾಯಿ ಹಾಗೂ ಫಲಕ ಒಳಗೊಂಡಿದೆ.

೩. ಭಾರತೀಯ ಸೇನೆ ಮತ್ತು ಇತರ ಯೂನಿಫಾರ್ಮ್ ಸೇನೆಗಳಿಗೆ ಸೇರಬಯಸುವ ಹಿಂದುಳಿದ ವರ್ಗಗಳ ಅರ್ಹ ಅಭ್ಯರ್ಥಿಗಳಿಗೆ ಉಚಿತ ವೃತ್ತಿಮಾರ್ಗದರ್ಶನ ಹಾಗೂ ತರಬೇತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಕರೆಯಲಾಗಿದೆ. ದಕ್ಷಿಣಕನ್ನಡ, ಉಡುಪಿ ಮತ್ತು ಉತ್ತರಕನ್ನಡ ಜಿಲ್ಲೆಗಳಲ್ಲಿ ತರಬೇತಿ ನೀಡಲಾಗುವುದು. ಅಭ್ಯರ್ಥಿಗಳು ತಮ್ಮ ಆಯ್ಕೆಯ ಜಿಲ್ಲೆಯನ್ನು ನಮೂದಿಸಿದ ಅರ್ಜಿಯನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕಚೇರಿಗೆ ಸಲ್ಲಿಸಬಹುದು. ಜುಲೈ ೧೦ ಅರ್ಜಿ ಸಲ್ಲಿಕೆಗೆ ಕಡೆಯ ದಿನ.

೪. ಬಾಗಲಕೋಟೆ ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿಗೆ ಬಿತ್ತನೆ ಬೀಜ ಮತ್ತು ರಸಗೊಬ್ಬರದ ಕೊರತೆ ಇರುವುದಿಲ್ಲ. ಈಗಾಗಲೇ ಶೇಕಡ ೭೫ರಷ್ಟು ಬಿತ್ತನೆ ಬೀಜ ವಿತರಣೆ ಮಾಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಗೊಬ್ಬರ ದಾಸ್ತಾನು ಉತ್ತಮವಾಗಿದೆ.

**<><*<><>*><>**

ಇನ್ನು ಹವಾವರ್ತಮಾನ...

ಉತ್ತರ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಾಧಾರಣವಾಗಿದ್ದು, ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ದುರ್ಬಲವಾಗಿದೆ. ಗಬ್ಬೂರಿನಲ್ಲಿ ೬, ಉಡುಪಿ, ಶೋರಾಪುರ್, ಸೈದಾಪುರ್‌ನಲ್ಲಿ ತಲಾ ೩ ಸೆಂಟಿ ಮೀಟರ್, ಅಂಕೋಲಾ, ಗೋಕರ್ಣ, ಕುಮಟಾ, ಕೆಂಭಾವಿ, ತಾವರಗೇರಾ, ಮುದಗಲ್, ಮಂತಾಳಾದಲ್ಲಿ ತಲಾ ೨ ಸೆಂಟಿಮೀಟರ್ ಮಳೆಯಾಗಿದೆ. ಮುನ್ಸೂಚನೆಯಂತೆ ಕರಾವಳಿ ಮತ್ತು ಒಳನಾಡಿನಲ್ಲಿ ಹಗುರದಿಂದ ಸಾಧಾರಣ ಮಳೆ ಸಾಧ್ಯತೆ. ಬೆಂಗಳೂರು ಮತ್ತು ಸುತ್ತಮುತ್ತ ಮೋಡ ಕವಿದ ವಾತರಣವಿದ್ದು, ಹಗುರದಿಂದ ಸಾಧಾರಣ ಮಳೆ ನಿರೀಕ್ಷಿತ. ಗರಿಷ್ಠ ೩೧ ಕನಿಷ್ಠ ೨೧ ಡಿಗ್ರಿ ಸೆಲ್ಸಿಯಸ್ ತಾಪಮಾನವಿರಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**